ವಿಜಾಪುರದಲ್ಲಿ ಬಸವೇಶ್ವರ ಅಂತರ ರಾಷ್ಟ್ರೀಯ ವಿ.ವಿ.ಸ್ಥಾಪನೆ

662 (666) ಶ್ರೀ ಅಪ್ಪುಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣ ಶೆಟ್ಟಿ : ಮಾನ್ಯ ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಕ್ತಿ ಭಂಡಾರಿ, ಕ್ರಾಂತಿಯೋಗಿ, ಜಗಜ್ಯೋತಿ ಬಸವೇಶ್ವರರು ಬಿಜಾಪುರ ಜಿಲ್ಲೆಯಲ್ಲಿ ಹುಟ್ಟಿ ಅಂತರರಾಷ್ಟ್ರೀಯ ಪ್ರಖ್ಯಾತಿಗಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಸವೇಶ್ವರ ತತ್ವ ಸಿದ್ಧಾಂತಗಳು ಮತ್ತು ಆದರ್ಶಗಳನ್ನು ಯುವ ಜನಾಂಗಕ್ಕೆ ಹಾಗೂ ಮುಂದಿನ ಪೀಳಿಗೆಗೆ ಪ್ರಚುರಪಡಿಸಲು ಬಸವೇಶ್ವರ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯವನ್ನು ಸ್ಥಾಪಿಸಿರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಇ) ಸದರಿ ವಿ.ವಿ. ಎಲ್ಲಿ ಸ್ಥಾಪಿಸಲು ಚಿಂತಿಸಲಾಗಿದೆ; ಅದರ ರೂಪುರೇಷೆಗಳೇನು?

ಈ) ಬಿಜಾಪುರದಲ್ಲಿ ಸದರಿ ವಿ.ವಿ. ಸ್ಥಾಪಿಸಲು ಸರ್ಕಾರ ಆಸಕ್ತಿ ಹೊಂದಿದೆಯೇ?

ಉ) ಈ ವಿಶ್ವವಿದ್ಯಾಲಯವನ್ನು ಯಾವಾಗ ಸ್ಥಾಪಿಸಲಾಗುವುದು; ಅದಕ್ಕಾಗಿ ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಳ್ಳುವುದು?

ಡಾ॥ ವಿ.ಎಸ್. ಆಚಾರ್ಯ (ಉನ್ನತ ಶಿಕ್ಷಣ, ಯೋಜನೆ, ಸಾಂಖ್ಯಿಕ, ಮುಜರಾಯಿ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು) :

ಅ) ಹೌದು.

ಆ) ಪ್ರಸ್ತುತ ಬಸವೇಶ್ವರ ಅಂತರರಾಷ್ಟ್ರೀಯ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.